## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಚನ್ನಬಸಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮೂಡಿಗೆರೆ, ಚಿಕ್ಕಮಗಳೂರು ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಛೇರಿಯಲ್ಲಿ ಭ್ರಷ್ಟಾಚಾರ ನಿರೋಧ ಕಾಯ್ದೆಯಡಿ ದಾಖಲಾಗಿರುವ ಅಕ್ರಮ ಆಸ್ತಿ ಹೊಂದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಸದರಿ ಅಧಿಕಾರಿಯವರನ್ನು ಸೇವೆಯಿಂದ ಅಮಾನತ್ತುಪಡಿಸುವ ಬಗ್ಗೆ.

ಓದಲಾಗಿದೆ: ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ. ಪತ್ರ ಸಂಖ್ಯೆ: ಲೋಕ್/ಐಎನ್‌ವಿ (ಜಿ)ಸಿಟಿಎಲ್/ಸಿಆರ್-4/2013 ಚಿಕ್ಕಮಗಳೂರು ದಿ: 09-04-2013.

------

**ಪ್ರಸ್ತಾವನೆ:**

ಶ್ರೀ ಚನ್ನಬಸಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮೂಡಿಗೆರೆ, ಚಿಕ್ಕಮಗಳೂರು ಜಿಲ್ಲೆ, ಇವರು ತಮ್ಮ ಬಲ್ಲಮೂಲಗಳ ಆದಾಯಕ್ಕಿಂತ ಹೆಚ್ಚಿನ ಸಂಪತ್ತು ಹೊಂದಿರುತ್ತಾರೆ ಎಂದು ನಂಬಲರ್ಹ ಮಾಹಿತಿಯ ಆಧಾರದ ಮೇರೆಗೆ, ಅವರ ವಿರುದ್ಧ ಚಿಕ್ಕಮಗಳೂರು ಕರ್ನಾಟಕ ಲೋಕಾಯುಕ್ತ ಪೋಲೀಸ್ ಠಾಣೆಯಲ್ಲಿ ಮೊಕದ್ದಮೆ ಸಂಖ್ಯೆ:4/2013 ಕಲಂ, 13(1)(ಇ) ಸಹವಾಚನ 13(2) ಭ್ರಷ್ಟಾಚಾರ ನಿರೋಧ ಕಾಯ್ದೆ 1988ರ ರೀತ್ಯಾ ದಿನಾಂಕ:21.03.2013 ರಂದು ಪ್ರಕರಣವನ್ನು ದಾಖಲಿಸಿಕೊಂಡ ನಂತರ ದಿನಾಂಕ: 21-03-2013 ರಂದು ಜಿಲ್ಲಾ ಮತ್ತು ಸತ್ರ ವಿಶೇಷ ನ್ಯಾಯಾಧೀಶರು, ಚಿಕ್ಕಮಗಳೂರು ರವರಿಂದ ಅಗತ್ಯವಾದ ಶೋಧನಾ ವಾರೆಂಟ್‌ಗಳನ್ನು ಪಡೆದುಕೊಂಡು ದಿನಾಂಕ: 22.03.2013ರಂದು ಆಪಾದಿತರು ಕರ್ತವ್ಯನಿರ್ವಹಿಸುತ್ತಿರುವ ಕಾರ್ಯನಿರ್ವಾಹಕ ಅಧಿಕಾರಿಯವರ ಕಛೇರಿ, ಮೂಡಿಗೆರೆ ತಾಲ್ಲೂಕು ಪಂಚಾಯಿತಿ, ಮೂಡಿಗೆರೆ, 2) ಆರೋಪಿತರ ಬಾಬ್ತು ಬೆಂಗಳೂರು ನಗರ, ನಾಗಶೆಟ್ಟಿಹಳ್ಳಿ, ಸಂಜಯನಗರ, ಎಇಸಿಎಸ್ ಬಡಾವಣೆ, 3ನೇ ಮುಖ್ಯ ರಸ್ತೆಯಲ್ಲಿರುವ ಖಾತಾ ನಂ.465 ಅಸೆಸ್‌ಮೆಂಟ್ ನಂ.70/03ರ "ಬಿ" ಬ್ಲಾಕ್‌ನಲ್ಲಿರುವ 2ನೇ ಅಂತಸ್ತಿನ ಮನೆ, 3) ಆರೋಪಿತರ ಕುಟುಂಬದವರು ವಾಸವಿರುವ "ಗಾಯಿತ್ರಿ ನಿಲಯ", ಪ್ಲಾಟ್ ನಂ.5, ದತ್ತನಗರ, ಎನ್‌ಜಿಓ ಕಾಲೋನಿ, ಗುಲ್ಬರ್ಗಾ ಮತ್ತು 4) ಆರೋಪಿತರ ಸ್ವಂತ ಊರು, ನಾಸಿರವಾಡಿ ಗ್ರಾಮ, ಆಳಂದ ತಾಲ್ಲೂಕು ಗುಲ್ಬರ್ಗಾ ಜಿಲ್ಲೆಯ ವಾಸದ ಮನೆ ಈ ಸ್ಥಳಗಳನ್ನು ಪಂಚ ಸಾಕ್ಷಿಗಳ ಸಮಕ್ಷಮ ಶೋಧಿಸಲಾಗಿ, ಆರೋಪಿತರು ತನ್ನ ಬಲ್ಲಮೂಲಗಳಗಿಂತ ಹೆಚ್ಚಿಗೆ ಹೊಂದಿರುವ ಅಕ್ರಮ ಆಸ್ತಿಗಳ ಮೌಲ್ಯ ರೂ.78,82,382-84/-ಗಳನ್ನು ಹೊಂದಿರುವುದು ಪ್ರಾಥಮಿಕ ತನಿಖೆಯಿಂದ ಕಂಡುಬಂದಿರುತ್ತದೆ. ಅಂದರೆ ಶೇ.271.80ರಷ್ಟು ಹೆಚ್ಚಿಗೆ ಅಕ್ರಮ ಆಸ್ತಿ ಹೊಂದಿರುವುದು ಸ್ಪಷ್ಟವಾಗಿರುತ್ತದೆ. ಸದರಿ ಹೆಚ್ಚುವರಿಯಾಗಿ ಅಕ್ರಮಮೂಲಗಳಂದ ಗಳಿಸಿರುವ ಚರ/ಸ್ಥಿರಾಸ್ತಿಗಳ ಮೌಲ್ಯವು ಆರೋಪಿತ ಸರ್ಕಾರಿ ನೌಕರರ ಶೋಧನಾ ಅವಧಿಯಲ್ಲಿ ನಿಗದಿತ ಮೂಲಗಳಂದ ಗಳಿಸಿರುವ ವರಮಾನಕ್ಕಿಂತ ಹೆಚ್ಚಿನ ಮೊತ್ತವಾಗಿರುತ್ತದೆ. ಅಲ್ಲದೇ ಆರೋಪಿತರು ವಿವಿಧ ಬಾಬ್ತುಗಳಗಾಗಿ ಮಾಡಿರುವ ಖರ್ಚು ವೆಚ್ಚಗಳು ಇನ್ನೂ ಕೆಲವು ಮೂಲಗಳಂದ ಬರಬೇಕಾಗಿರುತ್ತದೆ. ಇದರಿಂದ ಭವಿಷ್ಯದಲ್ಲಿ ಪ್ರಕರಣದ ತನಿಖೆ ಮುಂದುವರೆದಂತೆ ಹೆಚ್ಚಿನ ಚರ/ಸ್ಥಿರಾಸ್ತಿ ಮತ್ತು ಖರ್ಚು ವೆಚ್ಚಗಳ ಒಟ್ಟಾರೆ ಮೌಲ್ಯವು ಇನ್ನೂ ಹೆಚ್ಚಾಗುವ ಸಂಭವವಿರುತ್ತದೆ. ಆದ್ದರಿಂದ, ಈ ಅಧಿಕಾರಿ ಗೊತ್ತಾದ ಆದಾಯಕ್ಕಿಂತ ಹೆಚ್ಚಿನ ಅಕ್ರಮ ಆಸ್ತಿಗಳನ್ನು ಹೊಂದಿರುವುದು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ. ಎಂದು ಮೇಲೆ ಓದಲಾದ ದಿನಾಂಕ: 9.04.2013ರ ಪತ್ರದಲ್ಲಿ ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ವರದಿ ಮಾಡಿರುತ್ತಾರೆ.

ಮುಂದುವರೆದು ಸದರಿ ಆರೋಪಿತ ಅಧಿಕಾರಿಯವರು ಪ್ರಕರಣದ ಸುಗಮ ತನಿಖೆಗೆ ಅಡ್ಡಿ ಉಂಟುಮಾಡುವ ಅಥವಾ ತನಿಖೆಯಲ್ಲಿ ಹಸ್ತಕ್ಷೇಪ ಮಾಡುವ ಹಾಗೂ ಸಾಕ್ಷಿ ಪುರಾವೆಗಳನ್ನು ನಾಶಗೊಳಿಸುವ ಸಾಧ್ಯತೆಗಳಿರುವುದರಿಂದ ಸದರಿಯವರನ್ನು ಕೂಡಲೇ ಅಮಾನತ್ತಿನಲ್ಲಿಡಲು ಹಾಗೂ ಅವರ ಲೀನ್‌ಅನ್ನು ಬೇರೆಕಡೆಗೆ ವರ್ಗಾಯಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿರುತ್ತದೆ.

ಸರ್ಕಾರವು ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ರವರ ಪತ್ರ ಮತ್ತು ಸದರಿ ಪತ್ರದ ಜೊತೆ ಲಗತ್ತಿಸಿರುವ ವಿಶೇಷ ತನಿಖಾ ವರದಿ, ಪ್ರಥಮ ವರ್ತಮಾನ ವರದಿ, ಮಹಜರುಗಳ ಪ್ರತಿಗಳನ್ನು ಪರಿಶೀಲಿಸಿ, ಶ್ರೀ ಚನ್ನಬಸಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮೂಡಿಗೆರೆ, ಚಿಕ್ಕಮಗಳೂರು ಜಿಲ್ಲೆ, ಇವರು ತಮ್ಮ ಬಲ್ಲ ಮೂಲಗಳಿಗಿಂತಲೂ ಹೆಚ್ಚು ಪ್ರಮಾಣದ ಅಕ್ರಮ ಆಸ್ತಿಹೊಂದಿದ್ದು, ಹಾಗೂ ತನಿಖೆ ಮುಂದುವರೆದಿದ್ದು ಆಪಾದಿತರು ಸುಗಮ ತನಿಖೆಗೆ ಅಡ್ಡಿ ಉಂಟುಮಾಡುವ ಹಾಗೂ ಸಾಕ್ಷಿ ಪುರಾವೆಗಳನ್ನು ನಾಶಗೊಳಿಸುವ ಸಾಧ್ಯತೆಗಳಿರುವ ಅಂಶಗಳನ್ನು ಸರ್ಕಾರವು ಪರಿಶೀಲಿಸಿರುತ್ತದೆ.

ಆದ್ದರಿಂದ, ಪ್ರಕರಣದ ಸುಗಮ ತನಿಖೆಗೆ ಅನುವು ಮಾಡಿಕೊಡುವ ದೃಷ್ಟಿಯಿಂದ ಶ್ರೀ ಚನ್ನಬಸಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮೂಡಿಗೆರೆ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸುವುದು ಸೂಕ್ತವೆಂದು ಸರ್ಕಾರವು ತೀರ್ಮಾನಿಸಿ ಅದರನ್ವಯ ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 59 ವಿಸೇಬಿ 2013,ಬೆಂಗಳೂರು, ದಿನಾಂಕ:18-07-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ ಶ್ರೀ ಚನ್ನಬಸಪ್ಪ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮೂಡಿಗೆರೆ, ಚಿಕ್ಕಮಗಳೂರು ಜಿಲ್ಲೆ, ಇವರು ಬಲ್ಲ ಮೂಲಗಳಿಗಿಂತಲೂ ಹೆಚ್ಚುವರಿಯಾಗಿ ಅಕ್ರಮ ಆಸ್ತಿ ಹೊಂದಿರುವುದು ಪ್ರಾಥಮಿಕ ತನಿಖೆಯಲ್ಲಿ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಕ.ನಾ.ಸೇ. (ವ.ನಿ.ಮೇ) ನಿಯಮಗಳು 1957ರ ನಿಯಮ-10ನ್ನು ತಿದ್ದುಪಡಿ ಮಾಡಿದ ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 25 ಎಸ್‌ಡಿಇ 2007 ದಿನಾಂಕ: 26-08-2008 ರನ್ವಯ ಸದರಿ ಆರೋಪಿತ ಅಧಿಕಾರಿಯವರ ವಿರುದ್ಧ ಇಲಾಖಾ ವಿಚಾರಣೆ/ಶಿಸ್ತುಕ್ರಮವನ್ನು ಬಾಕಿ ಇಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಿದೆ.

ಅಮಾನತ್ತಿನ ಅವಧಿಯಲ್ಲಿ ಈ ಅಧಿಕಾರಿ ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ. ಸಕ್ಷಮ ಪ್ರಾಧಿಕಾರದ ಅನುಮತಿ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ರಾಘುನಾಥ್

(ಹೆಚ್.ಬಿ. ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

Am

ಗೆ:

1. ಮಹಾಲೇಖಪಾಲರು (ಎ & ಇ) ಕರ್ನಾಟಕ, ಬೆಂಗಳೂರು.

GOs

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಒಳನಾಡು ಮತ್ತು ಜಲಸಾರಿಗೆ ಇಲಾಖೆ.
3. ಅಪರ ಪೋಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು.
5. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಮಗಳೂರು ರವರ ಮುಖಾಂತರ).
6. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಒಳನಾಡು ಮತ್ತು ಜಲಸಾರಿಗೆ ಇಲಾಖೆ.
7. ಮಾನ್ಯ ಗ್ರಾ.ಅ. & ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ (ಆಡಳಿತ), ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಶಾಖೆ.
9. ವಿಶೇಷಾಧಿಕಾರಿ, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
10. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿ.

GOs